**<u>ದಿನಾಂಕಃ 07.02.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಎ.ಬಿ.ಎಸ್ ವಕೀಲರಿಂದಃ</u>**

ದಿನಾಂಕ 31.10.1983 ರ ಕ್ರಯ ಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-16 ಎಂದು, 1950 ರಿಂದ 1984 ರವರೆಗಿನ ಋಣಭಾರ ರಾಹಿತ್ಯ ಪ್ರಮಾಣ ಪತ್ರದ ಧೃಡೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-17 ಎಂದು, 2010 ರಿಂದ 2024 ರವರೆಗಿನ ಋಣಭಾರ ರಾಹಿತ್ಯ ಪ್ರಮಾಣ ಪತ್ರದ ಗಣಕೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-18 ಎಂದು, ಮರಣ ಸಮರ್ಥನೆ ಪತ್ರವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-19 ಎಂದು, ಪಡಿತರ ಚೀಟಿಯ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-20 ಎಂದು, ಆಧಾರ್ ಕಾರ್ಡ್ ನ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-21 ಎಂದು ಗುರುತಿಸಲಾಯಿತು.

<u>ಈ ಹಂತದಲ್ಲಿ ಪ್ರತಿವಾದಿಗಳು ಪ್ರತಿವಾದ ಪತ್ರವನ್ನು ಸಲ್ಲಿಸದೇ ಇರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಧೀಶರು, ತಿ.ನರಸಿಪುರ